## ಪದ್ಯ – ೦೩

## ಹೆಚ್ಚದೆ ಹಿಗ್ಗದೆ ಇದ್ದರೆ ಲೋಕಕ್ಕೆ ಮೆಚ್ಚು (ಪುರಂದರ ದಾಸರು)

ನೆಚ್ಚದಿರೀ ಭಾಗ್ಯ ಯಾರಿಗೂ ಸ್ಥಿರವಿಲ್ಲ ನಿಶ್ಚಯವೆಚ್ಚರಿಕೆ ॥ಪ॥
ಹೆಚ್ಚದೆ ಹಿಗ್ಗದೆ ಇದ್ದರೆ ಲೋಕಕ್ಕೆ ಮೆಚ್ಚು ಕೇಳೆಚ್ಚರಿಕೆ ॥ಅ॥

ಪೊಡವಿಪನೊಲುಮೆಯ ಕಡುನೆಚ್ಚಿ ಗರ್ವದಿ ನಡೆಯದಿರೆಚ್ಚರಿಕೆ
ಕೊಡನ ಅಂಧಕ ಪೊತ್ತು ನಡೆವಂತೆ ಅಧಿಕಾರ ಕಡೆಯಲ್ಲಿ ಎಚ್ಚರಿಕೆ
ಕಡುಚಳಕನು ತಾನೆನುತ್ತ ಪರರ ಅವಘಡಿಸದಿರೆಚ್ಚರಿಕೆ
ಬಡಬಗ್ಗರ ಬಾಯ ಬಡಿದು ಪಾಪದಿ ಹೆಜ್ಜೆ ಇಡಬೇಡ ಎಚ್ಚರಿಕೆ ॥

ದೊರೆ ಎನ್ನ ಬಲವು ಸುಸ್ಥಿರವೆಂದೆಲ್ಲರ ಹಗೆ ತರವಲ್ಲ ಎಚ್ಚರಿಕೆ
ಉರಗನ ಮುತ್ತಿ ಕಟ್ಟಿರುವೆಯು ಕೊರೆದಂತ ತೆರನಪ್ಪುದೆಚ್ಚರಿಕೆ
ಕರವ ಮುಗಿದು ಸಜ್ಜನರಿಗೆ ಶಿರ ಬಾಗಿ ಚರಿಸುತಿರೆಚ್ಚರಿಕೆ
ಸಿರಿಸೊಡರಿಗೆ ಗುರುಹಿರಿಯರ ಅವಮಾನ ಬಿರುಗಾಳಿ ಎಚ್ಚರಿಕೆ ॥

ಲೋಕಾಪವಾದಕೆ ಅಂಜಿ ನಡೆವುದು ವಿವೇಕ ಕೇಳೆಚ್ಚರಿಕೆ
ನಾಕೇಶಗಾದರು ಬಿಡದಪಕೀರ್ತಿ ಪರಾಕು ಕೇಳೆಚ್ಚರಿಕೆ
ಕಾಕು ಜನರ ಚಾಡಿ ನೀ ಕೇಳಿ ಕೋಪೋದ್ರೇಕ ಬೇಡೆಚ್ಚರಿಕೆ
ಭೂಕಾಂತೆ ನಡುನಡುಗುವಳು ನಿಷ್ಠುರವಾದ ವಾಕು ಬೇಡೆಚ್ಚರಿಕೆ ॥

ನಳಮಾಂಧಾತರೇನಾದರೆಂಬುದ ನೀ ತಿಳಿದು ನೋಡೆಚ್ಚರಿಕೆ

ಅಳಿವುದು ಕಾಯವು ಉಳಿವುದೊಂದೇ ಕೀರ್ತಿ ಇಳೆಯೊಳಗೆಚ್ಚರಿಕೆ
ಅಳಲಿಸಿ ಪರರನು ಗಳಿಸಿ ತಂದರ್ಥವು ಉಳಿಯದು ಎಚ್ಚರಿಕೆ
ಉಳಿದಲ್ಪ ಕಾಲವು ಧರ್ಮದ ಹಾದಿಯ ಹಳಿಯಬೇಡೆಚ್ಚರಿಕೆ ॥

ಪರಸತಿ ಧನ ಅಪಹರಿಸಲು ಸಿರಿ ಮೊಗದಿರುಹುವಳೆಚ್ಚರಿಕೆ
ನೆರೆ ಛಿದ್ರಕುಂಭದ ನೀರಿನಂತಾಯುಷ್ಯ ಸರಿಯುತಿದೆಚ್ಚರಿಕೆ
ಬರುವ ಹಾನಿ ವೃದ್ಧಿ ತನ್ನ ಕಾಲವ ಮೀರಲರಿಯದು ಎಚ್ಚರಿಕೆ
ವರದ ಪುರಂದರವಿಠಲನ ಚರಣವ ಮರೆಯದಿರೆಚ್ಚರಿಕೆ ॥

## ಸಟೆ ಹೇಳಿ ಸಂಸಾರ ಕೆಡಿಸಬೇಡ (ಕನಕದಾಸರು)

ಕೀರ್ತನೆಯ ಮಾಡಿ ಕೈವಲ್ಯ ಪಡೆವರು ಜನರು ಹರಿ ।
ಮೂರ್ತಿ ಶ್ರೀ ಚೆನ್ನಕೇಶವನ ಮನದೊಳಗಿಟ್ಟು

ಹಲವು ಮಾಯಗಳಿಂದ ಹಂಬಲಿಸಿ ಕೆಡಬೇಡ
ಬಲವಂತರೊಡನೆ ಹಗೆ ಮಾಡಬೇಡ
ಕುಲದಲಿ ಜನಿಸಿ ಕುಚೋದ್ಯ ಮಾಡಲುಬೇಡ
ನಲಿದು ಹರಿಯ ಪೊಗಳದ ನಾಲಗೆಯು ಬೇಡ

ಮಂದಮತಿಗಳ ಕೂಡ ಮಹಕಥೆಯ ನುಡಿಯಬೇಡ
ಯತಿಯಾದ ಮೇಲೆ ಸತಿಸುತರಾಸೆ ಬೇಡ

ಮತಿ ಬಿಟ್ಟು ಸಿಟ್ಟಿನಲಿ ನುಡಿಬೇಡ
ಹಿತ ತಪ್ಪಿ ನಡೆವಂಥ ಹೆಂಡತಿಯು ಬೇಡ

ವಿಟಜನರ ಕೂಡಿ ವೇಶ್ಯಾವಾರ್ತೆಗಿಳಿಯಬೇಡ
ಸಟೆ ಹೇಳಿ ಸಂಸಾರ ಕೆಡಿಸಬೇಡ
ತುಟಿ ಮೀರ್ದ ಹಲ್ಲಂತೆ ದೂತ ಎಂದಿಗು ಬೇಡ
ನಿಟಿಲನೇತ್ರನು ನಾನೆನುವ ಜಂಭ ಬೇಡ

ತೀರ್ಥಯಾತ್ರೆಗೆ ಪೋಗಿ ತಿರುತಿರುಗಿ ಬಳಲಿ ಕೃ-
ತಾರ್ಥನಾದೆನು ಎಂಬ ಘನತೆ ಬೇಡ
ಪಾರ್ಥಸಾರಥಿ ಕಾಗಿನೆಲೆಯಾದಿಕೇಶವನ
ಸಾರ್ಥಕದಿ ಭಜಿಸಿ ಸುಖಿಯಾಗು ಮನುಜ